# Bangalore
# Regional News
# 08.03.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಕಲಬುರಗಿಯ ಸಮಗ್ರ ಪ್ರಗತಿಗೆ ಕಳೆದೆರಡು ವರ್ಷಗಳಲ್ಲಿ 2 ಸಾವಿರ ಕೋಟಿ ರೂಪಾಯಿಗೂ ಅಧಿಕ ಅನುದಾನ – ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
2. ರಾಜ್ಯಾದ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನ ಆಚರಣೆ ; ವಿವಿಧ ಕಾರ್ಯಕ್ರಮಗಳಲ್ಲಿ ಮಹಿಳಾ ಸಾಧಕಿಯರಿಗೆ ಸನ್ಮಾನ
3. ಕಲಬುರಗಿ ಐಟಿಎಫ್ ಡಬ್ಲ್ಯು–35 ಮಹಿಳಾ ಟೆನಿಸ್ ; ಭಾರತದ ವೈಷ್ಣವಿ ಅಡ್ಕರ್ ಮುಡಿಗೆ ಸಿಂಗಲ್ಸ್ ಪ್ರಶಸ್ತಿ
4. ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್ : ಭಾರತ ವಿರುದ್ಧ ಟಾಸ್ ಗೆದ್ದ ನ್ಯೂಜಿಲ್ಯಾಂಡ್ ಫೀಲ್ಡಿಂಗ್ ಆಯ್ಕೆ

<><*<><>*><>

ಕಲಬುರಗಿ ಜಿಲ್ಲೆಯ ಸಮಗ್ರ ಪ್ರಗತಿಗೆ ಕಳೆದ 2 ವರ್ಷಗಳಲ್ಲಿ ಸರ್ಕಾರ 2 ಸಾವಿರ ಕೋಟಿ ರೂಪಾಯಿಗೂ ಅಧಿಕ ಅನುದಾನ ನೀಡಿದ್ದು, ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಬಡವರಿಗೆ 2 ಸಾವಿರ ಮನೆಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕಲಬುರಗಿಯಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, 365 ಕೋಟಿ ರೂಪಾಯಿ ವೆಚ್ಚದಲ್ಲಿ ಬೆಣ್ಣೆ ತೊರ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ 330 ಕೆಪಿಎಸ್ ಶಾಲೆಗಳ ಸ್ಥಾಪನೆಗೆ ಚಾಲನೆ ನೀಡಲಾಗುವುದು ಎಂದರು.

ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಮೊದಲ ಹಂತದಲ್ಲಿ 56 ಸಾವಿರ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ರಾಜ್ಯದ ಭವಿಷ್ಯದ ನಾಯಕ ಎಂದು ಶ್ಲಾಘಿಸಿದ ಉಪಮುಖ್ಯಮಂತ್ರಿಯವರು, ಮಲ್ಲಿಕಾರ್ಜುನ ಖರ್ಗೆ ಅವರ ಮಾರ್ಗದರ್ಶನದಲ್ಲಿ ಈ ಭಾಗದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು. ಗ್ಯಾರಂಟಿ ಯೋಜನೆಗಳಿಗಾಗಿ ವಾರ್ಷಿಕ 52 ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡುತ್ತಿರುವ ಸರ್ಕಾರವು, ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನಕ್ಕೂ ಹೆಚ್ಚಿನ ಪರಿಹಾರ ನಿಗದಿಪಡಿಸುವ ಮೂಲಕ ರೈತರ ಪರವಾಗಿ ನಿಂತಿದೆ ಎಂದರು.

<><*<><>*><>

ಇಂದು ನಾಡಿನಾದ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂಭ್ರಮ ಮನೆಮಾಡಿದೆ. 'ಎಲ್ಲಾ ಮಹಿಳೆಯರು ಮತ್ತು ಬಾಲಕಿಯರಿಗಾಗಿ ಹಕ್ಕುಗಳು, ನ್ಯಾಯ ಮತ್ತು ಕ್ರಮ' ಎಂಬುದು ಈ ವರ್ಷದ ಜಾಗತಿಕ ಘೋಷವಾಕ್ಯವಾಗಿದೆ. ಪ್ರತಿಯೊಬ್ಬ ಮಹಿಳೆಗೆ ಸಮಾನತೆ, ಸುರಕ್ಷತೆ ಮತ್ತು ನ್ಯಾಯದ ಲಭ್ಯತೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಸಾಧಕ ಮಹಿಳೆಯರಿಗೆ ಸನ್ಮಾನ ಮತ್ತು ಜಾಗೃತಿ ಜಾಥಾಗಳು ನಡೆಯುತ್ತಿದ್ದು, ಸಮಾಜದ ಸರ್ವತೋಮುಖ ಪ್ರಗತಿಯಲ್ಲಿ ಮಹಿಳೆಯರ ಪಾತ್ರವನ್ನು ಈ ದಿನ ಸ್ಮರಿಸಲಾಗುತ್ತಿದೆ.

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಯಿತು.

ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುತ್ತಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಹೇಳಿದರು. ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ವತಿಯಿಂದ ಇಂದು ಜರುಗಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಆಡಳಿತ ಹಾಗೂ ಅಧಿಕಾರವನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದಾರೆ ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಿಳೆಯರು ಸ್ತ್ರೀಶಕ್ತಿ ಮತ್ತು ಸ್ವಸಹಾಯ ಸಂಘಗಳಲ್ಲಿ ಕ್ರಿಯಾಶೀಲರಾಗಿ ಆರ್ಥಿಕ ಸಬಲೀಕರಣ ಹೊಂದಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಡಾ. ಆನಂದ ಕೆ. ಹೇಳಿದರು. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಹಿಳೆಯರ ಸಬಲೀಕರಣ ಮತ್ತು ಸದೃಢತೆಯನ್ನು ಆಚರಿಸುವ ದಿನವೇ ಈ ಮಹಿಳಾ ದಿನಾಚರಣೆ ಎಂದು ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ ಅಭಿಪ್ರಾಯಪಟ್ಟರು. ಅವರು ಇಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಜಿಲ್ಲಾ ಪೊಲೀಸ್ ಅಧ್ಯಕ್ಷರ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

<><*<><>*><>

ಮಹಿಳೆಯರು ಸಬಲರಾದಾಗ ಮಾತ್ರ ಕುಟುಂಬ ಮತ್ತು ಸಮಾಜವೂ ಸಹ ಸಬಲವಾಗುತ್ತದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಜಿಲ್ಲಾಡಳಿತ ಹಾಗೂ ಇಲಾಖೆಗಳ ಸಹಯೋಗದಲ್ಲಿ 'ಬೇಟಿ ಬಚಾವೋ ಬೇಟಿ ಪಢಾವೋ' ಯೋಜನೆಯಡಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಮಾನಸಿಕವಾಗಿ ಕುಗ್ಗದೇ ದೃಡಸಂಕಲ್ಪ ಹೊಂದಿ, ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಮುಂದಾಗಬೇಕು ಎಂದರು.

ಇದಕ್ಕೂ ಮುನ್ನ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಯೋಜನಾ ನಿರ್ದೇಶಕ ಮಂಜುನಾಥ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ, ಸೇರಿದಂತೆ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ –ಐಸಿಎಆರ್ ನಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಯಿತು.

'ಅಂತಾರಾಷ್ಟ್ರೀಯ ಮಹಿಳಾ ರೈತ ವರ್ಷ'ದ ಅಂಗವಾಗಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಕೃಷಿ ಮತ್ತು ಉದ್ಯಮ ರಂಗದ ಮಹಿಳಾ ಸಾಧಕರನ್ನು ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಯುಐಡಿಎಐ ನಿರ್ದೇಶಕಿ ಪ್ರಿಯಾ ಪಾಟೀಲ್ ಹಾಗೂ ಸಿರಿಧಾನ್ಯ ಉದ್ಯಮಿ ರತ್ನಮ್ಮ ಗುಂಡಮನಟ್ಟ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ರಾಷ್ಟ್ರ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಮತ್ತು ಲಿಂಗ ಸಮಾನತೆಯ ಮಹತ್ವದ ಕುರಿತು ಮಾತನಾಡಿದರು.

<><*<><>*><>

ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ರೋಡ್ ಶೋಗೆ ಸಮಾಜ ಕಲ್ಯಾಣ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಹೆಚ್.ಸಿ ಮಹದೇವಪ್ಪ ಅವರು ಇಂದು ಚಾಲನೆ ನೀಡಿದರು.

ಈ ವೇಳೆ ಸ್ವಚ್ಛತಾ ರೋಡ್ ಶೋ ನಲ್ಲಿ ಭಾಗವಹಿಸಿದವರನ್ನು ಉದ್ದೇಶಿಸಿ ಮಾತನಾಡಿದ ಅವರು, ಮೈಸೂರಿನಲ್ಲಿ ಸ್ವಚ್ಛತೆ, ಮಾದಕ ವಸ್ತುಗಳ ದುಷ್ಪರಿಣಾಮ, ಆರೋಗ್ಯದ ಬಗ್ಗೆ ಕಾಳಜಿ ಕುರಿತು ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ದೊಡ್ಡ ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ. ಸಾರ್ವಜನಿಕರು ಸರ್ಕಾರದೊಂದಿಗೆ ಸಹಕರಿಸಿ ಕೈಜೋಡಿಸಬೇಕು ಎಂದರು.

ಮಹಿಳೆಯರಿಗೆ ಶಿಕ್ಷಣ, ಸಮಾನತೆ ಆರ್ಥಿಕ ಸ್ವಾವಲಂಬನೆ, ರಾಜಕೀಯ ಅಧಿಕಾರ ಲಭ್ಯವಾಗಲಿ ಎಂಬ ಹಿನ್ನೆಲೆಯಲ್ಲಿ ಪ್ರತಿ ವರ್ಷ ಮಾರ್ಚ್ 8 ರಂದು ಮಹಿಳಾ ದಿನಾಚರಣೆ ಆಚರಿಸಲಾಗಿತ್ತಿದೆ ಎಂದರು.

<><*<><>*><>

ಯಾದಗಿರಿ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ರಸ್ತೆ, ಚರಂಡಿ, ಶಾಲಾ ಕೊಠಡಿ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಅವುಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಮದ್ರಿಕಿ, ಅರಳಹಳ್ಳಿ, ಸಾದ್ಯಾಪುರ ಹಾಗೂ ಕೊಡಮನಹಳ್ಳಿ ಗ್ರಾಮಗಳಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದ ಬಳಿಕ ಮಾತನಾಡಿದ ಅವರು, ಗ್ರಾಮಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಬೇಸಿಗೆ ಕಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ನಿಮ್ಮ ಹಂತದಲ್ಲಿ ಸಮಸ್ಯೆ ಬಗೆಹರಿಯದಿದ್ದರೆ ನೇರವಾಗಿ ತಮಗೆ ದೂರವಾಣಿ ಮೂಲಕ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ಬೆಂಗಳೂರು ನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಕೇಂದ್ರ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವತಿಯಿಂದ "ಭೀಮ ಗಾಯನ" ಸಂಗೀತ ಕಾರ್ಯಕ್ರಮವನ್ನು ಇದೇ 10ರಂದು ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಲಿದ್ದು, ಶಾಸಕ ರಿಜ್ವಾನ್ ಅರ್ಷದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದ ಕುರಿತು ಮಾಹಿತಿ ನೀಡಿರುವ ಬೆಂಗಳೂರು ನಗರ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಪಲ್ಲವಿ ಹೊನ್ನಾಪುರ, ಪ್ರಗತಿಪರ, ಭವ್ಯ ಭಾರತದ ಬುನಾದಿ ಹಾಕಲು ಶ್ರಮಿಸಿದ ಮಹನೀಯರ ಹೋರಾಟಗಳು, ವಿಚಾರಧಾರೆಗಳನ್ನು, ಹಾಡುಗಳ ಮೂಲಕ ಸ್ಮರಿಸುವ ಮತ್ತು ಜನಮಾನಸದಲ್ಲಿ ಜಾಗೃತಗೊಳಿಸುವ 'ಭೀಮ ಗಾಯನ' ಒಂದು ವಿಶೇಷ ಪ್ರಯತ್ನವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಕ್ರೀಡೆಗಳಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು, ದೈಹಿಕ ಸದೃಢತೆಯನ್ನು ಪ್ರೋತ್ಸಾಹಿಸುವುದು ಮತ್ತು ಎಲ್ಲಾ ವಯೋಮಾನದವರಲ್ಲಿ ಸಕ್ರಿಯ ಜೀವನಶೈಲಿಯ ಸಂಸ್ಕೃತಿಯನ್ನು ಬೆಳೆಸುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ. ಈ ನಿಟ್ಟಿನಲ್ಲಿ ನಾಳೆ ಧಾರವಾಡದ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಅಸ್ಮಿತಾ ಮಹಿಳೆಯರ ಕ್ರೀಡಾಕೂಟ ಆಯೋಜಿಸಲಾಗಿದೆ ಎಂದು ಮೇರಾ ಯುವ ಭಾರತ್ ಜಿಲ್ಲಾ ಯುವ ಅಧಿಕಾರಿ ಗೌತಮ್ ರೆಡ್ಡಿ ಹೇಳಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, 100 ಮೀಟರ್, 200 ಮೀಟರ್ ಹಾಗೂ 400 ಮೀಟರ್ಗಳ ಓಟದ ಸ್ಪರ್ಧೆ ಆಯೋಜಿಸಲಾಗಿದೆ. 13 ವರ್ಷದ ಒಳಗಿನ, 13–18 ವರ್ಷಗಳ, ಮತ್ತು 18 ವರ್ಷ ಮೇಲ್ಪಟ್ಟ ಎಂಬ ಮೂರು ವಿಭಾಗಗಳಲ್ಲಿ ಮಹಿಳೆಯರು ಭಾಗವಹಿಸಬಹುದು. ಕ್ರೀಡೆಗಳಲ್ಲಿ ಮುಕ್ತ ಅವಕಾಶ ನೀಡಲಾಗಿದೆ ಹಾಗಾಗಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

<><*<><>*><>

ಕಲಬುರಗಿಯಲ್ಲಿ ನಡೆದ ಐಟಿಎಫ್ ಡಬ್ಲ್ಯು 35 ಟೆನಿಸ್ ಟೂರ್ನಿಯ ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಭಾರತದ ವೈಷ್ಣವಿ ಅಡ್ಕರ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನಡೆದ ಈ ರೋಚಕ ಫೈನಲ್ ಹಣಾಹಣಿಯಲ್ಲಿ, ಮೂರನೇ ಶ್ರೇಯಾಂಕಿತ ವೈಷ್ಣವಿ ಅವರು ಅನುಭವಿ ಆಟಗಾರ್ತಿ ಭಾರತದವರೇ ಆದ ಅಂಕಿತಾ ರೈನಾ ಅವರನ್ನು 7–6, 6–4 ನೇರ ಸೆಟ್‌ಗಳಿಂದ ಪರಾಭವಗೊಳಿಸಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರು.

<><*<><>*><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಲಿವೆ.

ಪಂದ್ಯ ಸಂಜೆ 7 ಗಂಟೆಗೆ ಆರಂಭವಾಗಲಿದೆ. ಟಾಸ್ ಗೆದ್ದಿರುವ ನ್ಯೂಜಿಲೆಂಡ್ ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ.

ಒಟ್ಟಾರೆ ಟಿ–20 ವಿಶ್ವಕಪ್ ಇತಿಹಾಸದಲ್ಲಿ ಭಾರತ ಫೈನಲ್‌ಗೆ 4ನೇ ಬಾರಿ ಅರ್ಹತೆಗಳಿಸಿಕೊಂಡಿದ್ದು, ಈವರೆಗೆ 2 ಬಾರಿ ಟ್ರೋಫಿ ತನ್ನದಾಗಿಸಿಕೊಂಡಿದೆ.

ವಿಶೇಷವಾಗಿ 2007ರಲ್ಲಿ ದಕ್ಷಿಣ ಆಫ್ರಿಕಾ ಅತಿಥ್ಯದಲ್ಲಿ ನಡೆದ ಟಿ–20 ವಿಶ್ವಕಪ್‌ನ ಉದ್ಘಾಟನಾ ಆವೃತ್ತಿಯಲ್ಲಿ ಭಾರತ ಗೆದ್ದಿತ್ತು. ನಂತರ 2024ರಲ್ಲಿ ಟ್ರೋಫಿ ತನ್ನದಾಗಿಸಿಕೊಂಡಿತ್ತು.

<><*<>ಮುಕ್ತಾಯ<>*><>